04 ಕೊಠಡಿಗಳು ಹೆಚ್ಚುವರಿಯಾಗಿ ಬೇಕಾಗಿರುತ್ತದೆ. ಈ ಕೊಠಡಿಗಳನ್ನು ಅನುದಾನದ ಲಭ್ಯತೆಯನ್ನು ಆಧರಿಸಿ ವಿಶೇಷ ಅಭಿವೃದ್ಧಿ ಅನುದಾನದಡಿ ಅಥವಾ ಆರ್.ಐ.ಡಿ.ಎಫ್ ಅಡಿಯಲ್ಲಿ ಒದಗಿಸಲಾಗುವುದು.

ಆ) 2010–11ನೇ ಸಾಲಿಗೆ ಮಂಜೂರು ಮಾಡಲಾಗುವುದು.

ಇ) ಶಿರಾ ತಾಲ್ಲೂಕು ಸರ್ಕಾರಿ ಪದವಿ ಪೂರ್ವ ಕಾಲೇಜು ಚಿಕ್ಕನಹಳ್ಳಿ ಇಲ್ಲಿ ಸುಮಾರು 05 ಎಕರೆ ಜಮೀನು ಇದ್ದು, ತೋಟಗಾರಿಕೆ ಶಿಕ್ಷಕರು ಹಾಲಿ ಕೆಲಸ ನಿರ್ವಹಿಸುತ್ತಿದ್ದಾರೆ.

ವಿಶೇಷ ಶಿಕ್ಷಕರ ಹುದ್ದೆಗಳಲ್ಲಿ ಶಾಲೆಗೆ ಒಂದು ಹುದ್ದೆಯನ್ನು ಮಾತ್ರ ಮಂಜೂರು ಮಾಡಬೇಕಾಗಿರುವುದರಿಂದ ಹಾಲಿ ಕಾರ್ಯ ನಿರ್ವಹಿಸುತ್ತಿರುವ ತೋಟಗಾರಿಕಾ ಶಿಕ್ಷಕರ ಹುದ್ದೆಯನ್ನು ರದ್ದು ಪಡಿಸಿ, ಚಿತ್ರಕಲಾ ಶಿಕ್ಷಕರ ಹುದ್ದೆಯನ್ನು ಸೃಜಿಸುವ ಪ್ರಶ್ನೆ ಉದ್ಭವಿಸುವುದಿಲ್ಲ.

ಪ್ರೌಢ ಶಾಲೆಗಳ ಮಂಜೂರಾತಿಯ ಬಗ್ಗೆ

755 (570) ಶ್ರೀ ಕರಡಿ ಸಂಗಣ್ಣ ಅಮರಪ್ಪ (ಕೊಪ್ಪಳ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ರಾಜ್ಯದಲ್ಲಿ ಹೊಸದಾಗಿ ಪ್ರೌಢಶಾಲೆಗಳನ್ನು ಪ್ರಾರಂಭಿಸಲು ಪ್ರಸ್ತಾವನೆಯು ಬಂದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಪ್ರೌಢಶಾಲೆಗಳನ್ನು ಪ್ರಸಕ್ತ ಸಾಲಿನಲ್ಲಿ ಅಥವಾ ಮುಂದಿನ ವರ್ಷದಲ್ಲಿ ಪ್ರಾರಂಭಿಸಲಾಗುವುದೇ;

ಆ) ಕೊಪ್ಪಳ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಕುಣಿಕೇರಿ, ಚಿಲವಾಡಗಿ, ಹಟ್ಟಿ ಮತ್ತು ಹಲವಾಗಿಲು ಗ್ರಾಮಗಳಲ್ಲಿ ಪ್ರೌಢಶಾಲೆಗಳಿಗೆ ಬೇಡಿಕೆ ಇದೆಯೇ; ಈ ಬೇಡಿಕೆಗೆ ಸರ್ಕಾರವು ತೆಗೆದುಕೊಂಡು ಕ್ರಮಗಳೇನು?

ಶ್ರೀ ವಿಶ್ವೇಶ್ವರ ಹೆಗಡೆ ಕಾಗೇರಿ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಚಿವರು) :

ಅ) ಬಂದಿದೆ.

ಅನುದಾನ ಹಾಗೂ ಅವಶ್ಯಕತೆಯನ್ನು ಆಧರಿಸಿ ಪ್ರೌಢ ಶಾಲೆಗಳನ್ನು ಮಂಜೂರು ಮಾಡುವ ಬಗ್ಗೆ ಪರಿಶೀಲಿಸಲಾಗುತ್ತಿದೆ.

ಆ) ಕೊಪ್ಪಳ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಕುಣಿಕೇರಿ, ಚಿಲವಾಡಗಿ, ಹಟ್ಟಿ ಗ್ರಾಮಗಳಲ್ಲಿ ಸರ್ಕಾರಿ ಪ್ರೌಢಶಾಲೆಗಳನ್ನು ಪ್ರಾರಂಭಿಸಲು ಬೇಡಿಕೆ ಬಂದಿದ್ದು, ಉಳಿದ ಹಲವಾಗಿಲು ಗ್ರಾಮದಲ್ಲಿ ಸರ್ಕಾರಿ ಪ್ರೌಢಶಾಲೆಗಳನ್ನು ಪ್ರಾರಂಭಿಸಲು ಬೇಡಿಕೆ ಬಂದಿರುವುದಿಲ್ಲ.

ಅನುದಾನ ಹಾಗೂ ಅವಶ್ಯಕತೆಯನ್ನು ಆಧರಿಸಿ ಪ್ರೌಢ ಶಾಲೆಗಳನ್ನು ಮಂಜೂರು ಮಾಡುವ ಬಗ್ಗೆ ಪರಿಶೀಲಿಸಲಾಗುವುದು.

ಮಂಗಳೂರು ವಿಶ್ವವಿದ್ಯಾಲಯ ಮೂಲ ಸೌಕರ್ಯ

756 (1407) ಶ್ರೀ ಖಾದರ್ ಯು.ಟಿ. (ಮಂಗಳೂರು) : ಮಾನ್ಯ ಉನ್ನತ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮಂಗಳೂರು ವಿಶ್ವವಿದ್ಯಾಲಯದಲ್ಲಿ ಕನಿಷ್ಠ ಮೂಲಭೂತ ಸೌಲಭ್ಯಗಳು ಇಲ್ಲದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಹಾಗಿದ್ದಲ್ಲಿ, ಇದಕ್ಕಾಗಿ ಮಂಜೂರು ಮಾಡಿರುವ ಹಣ ಎಷ್ಟು;

ಇ) ಮೂಲಭೂತ ಸೌಲಭ್ಯಗಳನ್ನು ದೊರಕಿಸಿಕೊಡಲು ಯಾವ ಕ್ರಮ ಕೈಗೊಳ್ಳಲಾಗಿದೆ?

ಶ್ರೀ ಅರವಿಂದ ಲಿಂಬಾವಳಿ (ಉನ್ನತ ಶಿಕ್ಷಣ ಸಚಿವರು) :

ಅ) ಮಂಗಳೂರು ವಿಶ್ವವಿದ್ಯಾನಿಲಯಕ್ಕೆ ಆಡಿಟೋರಿಯಂ, ಹೊರಾಂಗಣ ಕ್ರೀಡಾಂಗಣ, ವಸತಿ ಗೃಹಗಳು ಇತ್ಯಾದಿಗಳ ಅವಶ್ಯಕತೆ ಇದ್ದು, ಇದರಲ್ಲಿ ವಿಶ್ವವಿದ್ಯಾಲಯದ ಆಂತರಿಕ ಸಂಪನ್ಮೂಲಗಳಿಂದ ಆಡಿಟೋರಿಯಂನ್ನು ನಿರ್ಮಿಸಲಾಗುತ್ತಿದ್ದು 400 ಮೀಟರ್ ಹೊರಾಂಗಣ ಕ್ರೀಡಾಂಗಣ, ವಸತಿ ಗೃಹಗಳ ನಿರ್ಮಾಣ ಅಗತ್ಯವಾಗಿರುತ್ತದೆ.

ಆ) ಮಂಗಳೂರು ವಿಶ್ವವಿದ್ಯಾಲಯದ ಮೂಲಭೂತ ಸೌಲಭ್ಯಕ್ಕಾಗಿ ಪ್ರತ್ಯೇಕ ಅನುದಾನ ಮಂಜೂರಾಗಿರುವುದಿಲ್ಲ. 2009–10ನೇ ಸಾಲಿನಲ್ಲಿ ರೂ. 320.00 ಲಕ್ಷ ಅಭಿವೃದ್ಧಿ ಅನುದಾನವಾಗಿ ಮಂಜೂರು ಮಾಡಿದ್ದು, ಈ ಅನುದಾನದಲ್ಲಿ ರೂ. 150.00 ಲಕ್ಷ ಕೊಡಗು ಜಿಲ್ಲೆಯ ಕುಶಾಲನಗರ ಹೋಬಳಿಯ ಚಿಕ್ಕಳುವಾರದಲ್ಲಿ ಉದ್ದೇಶಿಸಲಾದ ಸ್ನಾತಕೋತ್ತರ ಕೇಂದ್ರದ ಸ್ಥಾಪನೆಗೆ ವೆಚ್ಚ ಮಾಡಲಾಗುತ್ತಿದೆ.